Akashvani : Bangalore

National Bulletins In Kannada

19.08.2025 : 7.35am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**********

ಮುಖ್ಯಾಂಶಗಳು :

ಮುಖ್ಯಾಂಶಗಳು

೧. 'ಪಿಎಂ ಮಿತ್ರ ಪಾರ್ಕ್'ಗೆ ಇದೇ ೨೫ ರಂದು ಪ್ರಧಾನಿ ಭೂಮಿಪೂಜೆ

೨. ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗೆ ಸಚಿವ ಎಸ್.ಜೈಶಂಕರ್ ಮಾತುಕತೆ

೩. ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾದ ಗಗನಯಾತ್ರಿ ಶುಭಾಂಶು ಶುಕ್ಲಾ

೪. ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್: ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ವಿಭಾಗದಲ್ಲಿ ಭಾರತದ ಗಿರೀಶ್ ಗುಪ್ತಾಗೆ ಚಿನ್ನ

><><><><><><

ಆಗಸ್ಟ್ ೨೫ ರಂದು ಪ್ರಧಾನಿ ನರೇಂದ್ರ ಮೋದಿ ಅವರು ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿ ದೇಶದ ಮೊದಲ 'ಪಿಎಂ ಮಿತ್ರ ಪಾರ್ಕ್'ಗೆ ಭೂಮಿಪೂಜೆ ನೆರವೇರಿಸಲಿದ್ದಾರೆ ಎಂದು ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ತಿಳಿಸಿದ್ದಾರೆ. ಧಾರ್‌ನಲ್ಲಿ ಸ್ಥಾಪಿಸಲಾಗುವ ಪಿಎಂ ಮೆಗಾ ಇಂಟೆಗ್ರೇಟೆಡ್ ಜವಳಿ ಪ್ರದೇಶ ಮತ್ತು ಉಡುಪು ಪಾರ್ಕ್, ಭಾರತವನ್ನು ಜಾಗತಿಕ ಜವಳಿ ಶಕ್ತಿ ಕೇಂದ್ರವನ್ನಾಗಿ ಮಾಡುವಲ್ಲಿ ಪ್ರಮುಖ ಹೆಜ್ಜೆಯಾಗಲಿದೆ ಎಂದರು. ಎರಡು ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಹೂಡಿಕೆಯೊಂದಿಗೆ ೨ ಸಾವಿರದ ೧೫೮ ಎಕರೆಗಳಿಗೂ ಹೆಚ್ಚು ಪ್ರದೇಶದಲ್ಲಿ ವ್ಯಾಪಿಸಿರುವ ಇದು, ಅತ್ಯಾಧುನಿಕ ಮೂಲಸೌಕರ್ಯ, ಸುಸ್ಥಿರ ಅಭಿವೃದ್ಧಿ ಮತ್ತು ಕಾರ್ಯತಂತ್ರದ ನೀತಿ ಬೆಂಬಲದ ಮೂಲಕ ಜವಳಿ ಕೇಂದ್ರವಾಗುವ ಗುರಿಯನ್ನು ಹೊಂದಿದೆ ಎಂದು ಮೋಹನ್ ಯಾದವ್ ಹೇಳಿದ್ದಾರೆ.

><><><><><

ಪ್ರಸ್ತುತ ಸಂದರ್ಭದಲ್ಲಿ ಜಾಗತಿಕ ಆರ್ಥಿಕತೆಯಲ್ಲಿ ಸ್ಥಿರತೆ ಕಾಪಾಡುವುದು ಮತ್ತು ಹೆಚ್ಚಿಸುವುದು ಅತ್ಯಗತ್ಯವಾಗಿದೆ ಎಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ಅಭಿಪ್ರಾಯಪಟ್ಟಿದ್ದಾರೆ. ದೆಹಲಿಯಲ್ಲಿ ನಿನ್ನೆ ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗೆ ಮಾತುಕತೆ ನಡೆಸಿದ ಸಚಿವ ಎಸ್.ಜೈಶಂಕರ್, ಸುಧಾರಿತ ಬಹುಪಕ್ಷೀಯತೆ ಇಂದಿನ ಅಗತ್ಯುವಾಗಿದ್ದು, ಭಾರತ, ನ್ಯಾಯಯುತ, ಸಮತೋಲಿತ ಮತ್ತು ಬಹುಧ್ರುವೀಯ ವಿಶ್ವ ಕ್ರಮವನ್ನು ಬಯಸುತ್ತದೆ ಎಂದು ಹೇಳಿದರು. ಎಲ್ಲಾ ರೀತಿಯ ಭಯೋತ್ಪಾದನೆಯ ವಿರುದ್ಧದ ಹೋರಾಟ, ಭಾರತದ ಪ್ರಮುಖ ಆದ್ಯತೆಯಾಗಿದೆ ಎಂದು ಜೈಶಂಕರ್ ಸ್ಪಷ್ಟಪಡಿಸಿದ್ದಾರೆ. ಭಾರತ-ಚೀನಾ ಸಂಬಂಧ ಪರಸ್ಪರ ಗೌರವ, ಸೂಕ್ಷ್ಮತೆ ಮತ್ತು ಹಿತಾಸಕ್ತಿ ಎಂಬ ಮೂರು ಪರಸ್ಪರ ತತ್ವಗಳಿಂದ ಮಾರ್ಗದರ್ಶಿಸಲ್ಪಡಬೇಕು. ವ್ಯತ್ಯಾಸಗಳು ವಿವಾದಗಳಾಗಿ ಬದಲಾಗಬಾರದು, ಸ್ಪರ್ಧೆ ಸಂಘರ್ಷವಾಗಿ ಬದಲಾಗಬಾರದು ಎಂದು ಸಚಿವ ಎಸ್.ಜೈಶಂಕರ್ ಪ್ರತಿಪಾದಿಸಿದರು.

ಧ್ವನಿ: ಎಸ್.ಜೈಶಂಕರ್ ( ೧೯ ಸೆಕೆಂಡುಗಳು)

ಆರ್ಥಿಕ ಮತ್ತು ವ್ಯಾಪಾರ ಸಂಬಂಧ, ಪ್ರವಾಸೋದ್ಯಮ, ಜನರ ನಡುವಿನ ಸಂಪರ್ಕ, ನದಿ ದತ್ತಾಂಶ ಹಂಚಿಕೆ, ಗಡಿ ವಿಚಾರ, ಸಂಪರ್ಕ, ದ್ವಿಪಕ್ಷೀಯ ವಿನಿಮಯ ಸೇರಿದಂತೆ ವ್ಯಾಪಕ ಶ್ರೇಣಿಯ ವಿಷಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು.

><><><><><

೨೦೩೫ ರ ವೇಳೆಗೆ ಕಾರ್ಯಸಮರ್ಥ ಭಾರತೀಯ ಅಂತರಿಕ್ಷ ನಿಲ್ದಾಣವನ್ನು ಸ್ಥಾಪಿಸಲು ಮತ್ತು ೨೦೪೦ ರ ವೇಳೆಗೆ ಮಾನವಸಹಿತ ಚಂದ್ರನ ಮೇಲೆ ಭಾರತೀಯ ಬಾಹ್ಯಾಕಾಶ ನೌಕೆ ಕಳುಹಿಸಲು ಸರ್ಕಾರ ನಿರ್ಧರಿಸಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಪುನರುಚ್ಚರಿಸಿದರು. ೨೦೪೭ರ ವೇಳೆಗೆ ವಿಕಸಿತ ಭಾರತ ಆಗುವ ಗುರಿಯನ್ನು ತಲುಪುವ ಮೊದಲೇ ಈ ಕಾರ್ಯಾಚರಣೆಗಳನ್ನು ಪೂರ್ಣಗೊಳಿಸಲಾಗುವುದು ಎಂದು ಅವರು ಹೇಳಿದರು. ೨೦೪೭ರ ವೇಳೆಗೆ ವಿಕಸಿತ ಭಾರತಕ್ಕಾಗಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಭಾರತದ ಮೊದಲ ಗಗನಯಾತ್ರಿ - ಬಾಹ್ಯಾಕಾಶದ ನಿರ್ಣಾಯಕ ಪಾತ್ರ ಕಾರ್ಯಕ್ರಮದ ಕುರಿತು ಲೋಕಸಭೆಯಲ್ಲಿ

ವಿಶೇಷ ಚರ್ಚೆಯ ಸಂದರ್ಭದಲ್ಲಿ ಮಾತನಾಡಿದ ಸಚಿವರು ಈ ವಿಷಯ ತಿಳಿಸಿದರು. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಗಗನಯಾತ್ರಿ ಶುಭಾಂಶು ಶುಕ್ಲಾ ಅವರ ಐತಿಹಾಸಿಕ ಕಾರ್ಯಾಚರಣೆಯ ಸಾಧನೆಗಳನ್ನು ಸಚಿವರು ಶ್ಲಾಘಿಸಿದರು. ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಮಾಡಿದ ಸಾಧನೆಯ ಬಗ್ಗೆ ಇಡೀ ದೇಶ ಹೆಮ್ಮೆಪಡುತ್ತಿದೆ ಎಂದು ಡಾ.ಜಿತೇಂದ್ರ ಸಿಂಗ್ ಹೇಳಿದರು. ಸಿಂಧೂರ್ ಕಾರ್ಯಾಚರಣೆಯ ಸಮಯದಲ್ಲಿ ಬಾಹ್ಯಾಕಾಶ ಮತ್ತು ತಂತ್ರಜ್ಞಾನ ಇಲಾಖೆಯ ಪಾತ್ರವನ್ನು ಉಲ್ಲೇಖಿಸಿದ ಸಚಿವರು, ಕಾರ್ಯಾಚರಣೆಯ ಸಮಯದಲ್ಲಿ ಬಳಸಲಾದ ತಂತ್ರಜ್ಞಾನಗಳು ಪ್ರಧಾನಿ ಮೋದಿ ಸರ್ಕಾರದ ಅವಧಿಯಲ್ಲಿಯೂ ಅಭಿವೃದ್ಧಿಗೊಂಡಿವೆ ಎಂದರು. ಭಾರತೀಯ ಆರ್ಥಿಕತೆಯ ಬೆಳವಣಿಗೆಯಲ್ಲಿ ಬಾಹ್ಯಾಕಾಶ ವಲಯವು ನಿರ್ಣಾಯಕ ಪಾತ್ರ ವಹಿಸಿದೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ಮಾಡಿದ ಸಂಶೋಧನೆ ಮತ್ತು ನಾವೀನ್ಯತೆಗಳು ವಿವಿಧ ಕ್ಷೇತ್ರಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಮತ್ತು ಜನರ ಜೀವನವನ್ನು ಸುಲಭಗೊಳಿಸುತ್ತಿವೆ ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದರು.

><><><><><><

ಸಂಸತ್ತಿನ ಕಲಾಪಗಳಿಗೆ ಅಡ್ಡಿಪಡಿಸುತ್ತಿರುವುದಕ್ಕಾಗಿ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ವಿರೋಧ ಪಕ್ಷಗಳನ್ನು ಟೀಕಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೪೭ ರ ವೇಳೆಗೆ ವಿಕಸಿತ ಭಾರತಕ್ಕಾಗಿ ಬಾಹ್ಯಾಕಾಶ ಕಾರ್ಯಕ್ರಮದ ನಿರ್ಣಾಯಕ ಪಾತ್ರದ ಮೇಲೆ ಕೇಂದ್ರೀಕರಿಸಿ, ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಭಾರತದ ಮೊದಲ ಗಗನಯಾತ್ರಿ ಕುರಿತು ಸದನವು ಚರ್ಚೆಯನ್ನು ಕೈಗೆತ್ತಿಕೊಂಡಾಗ ಲೋಕಸಭೆಯಲ್ಲಿ ವಿರೋಧ ಪಕ್ಷಗಳು ಅಡ್ಡಿಪಡಿಸಿದ್ದು ಸರಿಯಲ್ಲ ಎಂದರು. ಭಾರತ ಮಾಡಿದ ಸಾಧನೆಗಳನ್ನು ಸಂಸತ್ತು ಯಾವಾಗಲೂ ಗೌರವಿಸುತ್ತದೆ ಎಂದು ಅವರು ಹೇಳಿದರು. ಚುನಾವಣಾ ಆಯೋಗದ ಕೆಲಸದಲ್ಲಿ, ಯಾರಾದರೂ ಯಾವುದೇ ಆಕ್ಷೇಪಣೆಯನ್ನು ಹೊಂದಿದ್ದರೆ, ಅವರು ಚುನಾವಣಾ ಆಯೋಗಕ್ಕೆ ಮೇಲ್ಮನವಿ ಸಲ್ಲಿಸಬೇಕು ಎಂದರು.

ಆರೋಪಗಳಿಗೆ ಸಂಬಂಧಿಸಿದ ಕೆಲವು ದಾಖಲೆಗಳನ್ನು ಭಾರತೀಯ ಚುನಾವಣಾ ಆಯೋಗವು ಕಾಂಗ್ರೆಸ್ ಪಕ್ಷದಿಂದ ಕೇಳಿದೆ. ಸಾಂವಿಧಾನಿಕ ಸಂಸ್ಥೆಯನ್ನು ಗೌರವಿಸುವುದು ಮತ್ತು ಉತ್ತರವನ್ನು ಸಲ್ಲಿಸುವುದು ಪಕ್ಷದ ಜವಾಬ್ದಾರಿಯಾಗಿದೆ ಎಂದು ಸಚಿವ ಕಿರಣ್ ರಿಜಿಜು ಹೇಳಿದರು.

><><><><><

ಆಕ್ಸಿಯಮ್-೪ ಬಾಹ್ಯಾಕಾಶ ಮಿಷನ್‌ನ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ನಿನ್ನೆ ನವದೆಹಲಿಯ ಲೋಕ ಕಲ್ಯಾಣ್ ಮಾರ್ಗದಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾದರು. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಐತಿಹಾಸಿಕ ಭೇಟಿಯ ನಂತರ ಶುಕ್ಲಾ ನಿನ್ನೆ ಭಾರತಕ್ಕೆ ಮರಳಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ, ಬಾಹ್ಯಾಕಾಶದಲ್ಲಿನ ತಮ್ಮ ಅನುಭವಗಳು, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿನ ಪ್ರಗತಿ ಹಾಗೂ ಭಾರತದ ಮಹತ್ವಾಕಾಂಕ್ಷೆಯ ಗಗನಯಾನ ಮಿಷನ್ ಸೇರಿದಂತೆ ವಿವಿಧ ವಿಷಯಗಳ ಕುರಿತು ಶುಕ್ಲಾ ಅವರೊಂದಿಗೆ ಚರ್ಚಿಸಿರುವುದಾಗಿ ತಿಳಿಸಿದ್ದಾರೆ. ಇದೇ ವೇಳೆ ಶುಭಾಂಶು ಶುಕ್ಲಾ ಅವರು ಪ್ರಧಾನಿ ಮೋದಿ ಅವರಿಗೆ ಆಕ್ಸಿಯಮ್-೪ ಮಿಷನ್ ಪ್ಯಾಚ್ ಅನ್ನು ಉಡುಗೊರೆಯಾಗಿ ನೀಡಿದರು ಮತ್ತು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ತೆಗೆದ ಭೂಮಿಯ ಚಿತ್ರಗಳನ್ನು ತೋರಿಸಿದರು.

><><><><><

ಮುಂದಿನ ಪೀಳಿಗೆಯ ಸುಧಾರಣೆಗಳ ಮಾರ್ಗಸೂಚಿಯನ್ನು ಚರ್ಚಿಸಲು ಪ್ರಧಾನಿ ನರೇಂದ್ರ ಮೋದಿ ದೆಹಲಿಯಲ್ಲಿ ನಿನ್ನೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ, ಎಲ್ಲಾ ವಲಯಗಳಲ್ಲಿ ತ್ವರಿತ ಸುಧಾರಣೆಗಳಿಗೆ ಬದ್ಧರಾಗಿದ್ದೇವೆ. ಇದು ಜೀವನ ಸುಲಭತೆ, ವ್ಯವಹಾರ ಮಾಡುವ ಸುಲಭತೆ ಮತ್ತು ಸಮೃದ್ಧಿಯನ್ನು ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ. ಸಭೆಯಲ್ಲಿ ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್ ಮತ್ತು ನಿತಿನ್ ಗಡ್ಕರಿ ಭಾಗವಹಿಸಿದ್ದರು.

><><><><><

೧೯೬೦ ರ ಸಿಂಧೂ ಜಲ ಒಪ್ಪಂದವು ಭಾರತದ ನೀರಿನ ಭದ್ರತೆ ಮತ್ತು ರಾಷ್ಟ್ರೀಯ ಹಿತಾಸಕ್ತಿಯನ್ನು ಶಾಶ್ವತವಾಗಿ ರಾಜಿ ಮಾಡಿಕೊಂಡ ನಿರ್ಧಾರವಾಗಿದೆ ಎಂದು ಬಿಜೆಪಿ ಅಧ್ಯಕ್ಷ ಹಾಗೂ ಕೇಂದ್ರ ಸಚಿವ ಜೆ.ಪಿ.ನಡ್ಡಾ ದೂರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ವೈಯಕ್ತಿಕ ಮಹತ್ವಾಕಾಂಕ್ಷೆಗಳಿಂದ ರಾಷ್ಟ್ರೀಯ ಹಿತಾಸಕ್ತಿಯನ್ನು ಬಲಿ ನೀಡಿ, ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಮಾಡಿದ ದೊಡ್ಡ ಪ್ರಮಾದಗಳಲ್ಲಿ ಇದು ಒಂದು ಎಂದು ಆರೋಪಿಸಿದರು. ಪ್ರಮುಖವಾಗಿ ಜವಾಹರಲಾಲ್ ನೆಹರು ಅವರು ಭಾರತೀಯ ಸಂಸತ್ತನ್ನು ಸಂಪರ್ಕಿಸದೆ ಜಲ ಒಪ್ಪಂದಕ್ಕೆ ಸಹಿ ಹಾಕಿದರು. ಈ ಒಪ್ಪಂದಕ್ಕೆ ೧೯೬೦ ರ ಸೆಪ್ಟೆಂಬರ್ ನಲ್ಲಿ ಸಹಿ ಹಾಕಲಾಯಿತು. ಆದರೆ, ಅದನ್ನು ಎರಡು ತಿಂಗಳ ನಂತರ ಸಂಸತ್ತಿನ ಮುಂದೆ ಇಡಲಾಯಿತು ಎಂದು ಅವರು ವಿವರಿಸಿದರು. ಜವಾಹರಲಾಲ್ ನೆಹರು ಅವರು ಪಾಕಿಸ್ತಾನದೊಂದಿಗೆ ಸಿಂಧೂ ಜಲ ಒಪ್ಪಂದಕ್ಕೆ ಸಹಿ ಹಾಕಿದಾಗ, ಅವರು ಏಕಪಕ್ಷೀಯವಾಗಿ ಸಿಂಧೂ ಜಲಾನಯನ ಪ್ರದೇಶದ ೮೦ ಪ್ರತಿಶತದಷ್ಟು ನೀರನ್ನು ಪಾಕಿಸ್ತಾನಕ್ಕೆ ಹಸ್ತಾಂತರಿಸಿದ್ದಾರೆ. ಇದರಿಂದಾಗಿ ಭಾರತಕ್ಕೆ ಕೇವಲ ೨೦ ಪ್ರತಿಶತದಷ್ಟು ಪಾಲು ಮಾತ್ರ ಉಳಿದಿದೆ ಎಂದು ಸಚಿವ ಜೆ.ಪಿ.ನಡ್ಡಾ ಹೇಳಿದರು.

><><><><><

ಕಝಾಕಿಸ್ತಾನದ ಶಿಮ್ಕೆಂಟ್‌ನಲ್ಲಿ ನಡೆದ ೧೬ನೇ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್‌ನ ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ವಿಭಾಗದಲ್ಲಿ ಭಾರತದ ಗಿರೀಶ್ ಗುಪ್ತಾ ಚಿನ್ನ ಗೆದ್ದಿದ್ದಾರೆ. ೧೭ ವರ್ಷದ ಗಿರೀಶ್, ಫೈನಲ್‌ನಲ್ಲಿ ೨೪೧.೩ ಅಂಕಗಳನ್ನು ಗಳಿಸಿ, ದೇವ್ ಪ್ರತಾಪ್ ಅವರನ್ನು ಹಿಂದಿಕ್ಕಿದರು. ೨೩೮.೬ ಅಂಕಗಳನ್ನು ಗಳಿಸಿದ ದೇವ್ ಪ್ರತಾಪ್ ಬೆಳ್ಳಿ ಗೆದ್ದರು.

><><><><><